ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ - ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ  ದಿನಾಂಕ : DATE 29-10-20

# ಶಿಕ್ಷಕರ ಕ್ಷೇತ್ರ: ಮತದಾನ ಪ್ರಮಾಣ ಏರಿಕೆ

ಪ್ರ.ವಾ. 29-10-20

ಬೆಂಗಳೂರು: ವಿಧಾನಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರದ ಮತದಾನ ಶಾಂತಿಯುತವಾಗಿ ನಡೆದಿದ್ದು, ಶೇ 66.20ರಷ್ಟು ಮತದಾನವಾಗಿದೆ. ಕಳೆದ ಬಾರಿ ಈ ಕ್ಷೇತ್ರದಲ್ಲಿ ಅತ್ಯಂತ ಕಡಿಮೆ ಅಂದರೆ ಶೇ 44.91 ರಷ್ಟು ಮತದಾನವಾಗಿತ್ತು. ಈ ಬಾರಿ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಮತ ಚಲಾಯಿಸಿದ್ದಾರೆ.

ಈ ಕ್ಷೇತ್ರದ ವ್ಯಾಪ್ತಿಗೆ ಬರುವ ದೊಡ್ಡಬಳ್ಳಾಪುರದ ಮತಗಟ್ಟೆಯೊಂದರಲ್ಲಿ ಬಿಜೆಪಿ ಕಾರ್ಯಕರ್ತರನ್ನು ಒಳಗೆ ಬಿಡಲಾಗಿದೆ ಎಂದು ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು.

ಶಿಕ್ಷಕರ ಕ್ಷೇತ್ರ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳನ್ನು ಒಳಗೊಂಡಿದೆ. ಗ್ರಾಮಾಂತರ ಜಿಲ್ಲೆಯಲ್ಲಿ ಶೇ 90 ರಷ್ಟು ಮತದಾನವಾಗಿದೆ. 2,268 ಮತದಾರರ ಪೈಕಿ 2031 ಮತದಾರರು ಮತ ಚಲಾಯಿಸಿದ್ದಾರೆ. ಎಲ್ಲ ಮತಗಟ್ಟೆಗಳಲ್ಲಿ ಕೋವಿಡ್ ಮಾರ್ಗಸೂಚಿಯನ್ನು ಕಟ್ಟುನಿಟ್ಟಾಗಿ ಪಾಲಿಸಲಾಗಿತ್ತು.

ಕ್ಷೇತ್ರದಲ್ಲಿ ಬಿಜೆಪಿಯ ಪುಟ್ಟಣ್ಣ, ಕಾಂಗ್ರೆಸ್‌ನಿಂದ ಪ್ರವೀಣ್ ಪೀಟರ್ ಮತ್ತು ಜೆಡಿಎಸ್‌ನಿಂದ ಎ.ಪಿ. ರಂಗನಾಥ್ ಅವರು ಕಣದಲ್ಲಿದ್ದಾರೆ. ನ.2 ರಂದು ಬೆಂಗಳೂರಿನ ಸರ್ಕಾರಿ ಕಲಾ ಕಾಲೇಜಿನಲ್ಲಿ ಮತಗಳ ಎಣಿಕೆ ನಡೆಯಲಿದೆ.



ವಿಧಾನಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರದ ಚುನಾವಣೆಯ ಮತದಾನ ದಿನವಾದ ಬುಧವಾರ ತಮ್ಮ ಹಕ್ಕು ಚಲಾಯಿಸಲು ಸಾಲಿನಲ್ಲಿ ನಿಂತಿದ್ದ ಶಿಕ್ಷಕರು ತಮ್ಮ ಗುರುತಿನ ಚೀಟಿಗಳನ್ನು ಪ್ರದರ್ಶಿಸಿದರು –ಪ್ರಜಾವಾಣಿ ಚಿತ್ರ

## ಹಣ ಹಂಚುತ್ತಿದ್ದ ಶಿಕ್ಷಕ ವಶಕ್ಕೆ

ಕನಕಪುರ: ಬೆಂಗಳೂರು ಶಿಕ್ಷಕರ ಕ್ಷೇತ್ರದ ಚುನಾವಣಾ ಮತಗಟ್ಟೆ ಬಳಿ ಮತದಾರರಿಗೆ ಹಣ ಹಂಚುತ್ತಿದ್ದ ಆರೋಪದ ಮೇಲೆ ಶಿಕ್ಷಕರೊಬ್ಬರನ್ನು ಪೊಲೀಸರು ಬುಧವಾರ ವಶಕ್ಕೆ ಪಡೆದಿದ್ದಾರೆ.

ಮತಗಟ್ಟೆ ಪರಿಶೀಲನೆಗೆ ಬಂದ ಕನಕಪುರ ತಹಶೀಲ್ದಾರ್ ವರ್ಷಾ ಒಡೆಯರ್ ಅವರು, ಹಣ ಹಂಚುತ್ತಿದ್ದ ಶಿಕ್ಷಕನನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದರು.

ಪೊಲೀಸರು ಆ ಶಿಕ್ಷಕನಿಂದ ₹ 80 ಸಾವಿರ ವಶಪಡಿಸಿಕೊಂಡಿದ್ದಾರೆ. ನ್ಯಾಯಾಲಯದ ಅನುಮತಿ ಪಡೆದ ಬಳಿಕ ಶಿಕ್ಷಕನ ವಿರುದ್ಧ ದೂರು ದಾಖಲಿಸುವುದಾಗಿ ಪೊಲೀಸರು ತಿಳಿಸಿದ್ದಾರೆ.